# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1831 (2097)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಪುನರ್‌ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಲ್ಲಿ ಹೆಚ್ಚುವರಿಯಾಗಿ ಇರುವ ಜಾಗಗಳನ್ನು ಹಂಚಿಕೆ ಮಾಡುವ ಕುರಿತು

(ಅ) ಪುನರ್‌ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಲ್ಲಿ ಹೆಚ್ಚುವರಿಯಾಗಿ ಇರುವ ಜಾಗಗಳಲ್ಲಿ ಸರ್ಕಾರಿ ಶಾಲಾ/ಕಾಲೇಜುಗಳನ್ನು ಅಥವಾ ಯಾವುದೇ ಸರ್ಕಾರಿ ಕಛೇರಿಗಳನ್ನು ಪ್ರಾರಂಭಿಸಲು ಮತ್ತು ಅಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದಕ್ಕಾಗಿ ಭೂಮಿಯನ್ನು ಹಂಚಿಕೆ ಮಾಡುವಾಗ ಅನುಸರಿಸುವ ನಿಯಮಗಳೇನು ; ಅಥವಾ ಯಾವ ಮಾನದಂಡಗಳ ಆಧಾರದ ಮೇಲೆ ಭೂಮಿಯನ್ನು ಹಂಚಿಕೆ ಮಾಡಲಾಗುವುದು ;

(ಆ) ಪುನರ್‌ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳಲ್ಲಿ ಹೆಚ್ಚುವರಿಯಾಗಿ ಇರುವ ಜಾಗಗಳನ್ನು "ಬೆಲೆ ಆಧಾರದ ಮೇಲೆ" ಶಾಲಾ/ಕಾಲೇಜುಗಳಿಗೆ ಹಂಚಿಕೆ ಮಾಡುವುದು ಎಷ್ಟು ಸೂಕ್ತ ;

(ಇ) ಗ್ರಾಮಗಳನ್ನು ಸ್ಥಳಾಂತರಿಸುವಾಗ ಆ ಗ್ರಾಮಗಳ ಸಂತ್ರಸ್ತರ ಹಿತವನ್ನು ಕಾಪಾಡುವುದನ್ನೇ ಮುಖ್ಯವನ್ನಾಗಿಸಿಕೊಂಡು ಪುನರ್‌ವಸತಿ ಮತ್ತು ಪುನರ್ ನಿರ್ಮಾಣ ಕೇಂದ್ರಗಳು ನಿರ್ಮಾಣವಾಗಿರುವುದರಿಂದ ಹೆಚ್ಚುವರಿಯಾಗಿರುವ ಜಾಗಗಳನ್ನು ಸಂತ್ರಸ್ತರ ಅವಶ್ಯಕತೆಗಳಿಗೆ ಅನುಗುಣವಾಗಿ ಉಚಿತವಾಗಿ ಭೂಮಿಯನ್ನು ಹಂಚಿಕೆ ಮಾಡಲಾಗುವುದೇ ;

(ಈ) ಬೆಲೆ ಆಧಾರದ ಮೇಲೆ ಹಂಚಿಕೆ ಮಾಡುವುದಾದರೆ ಯಾವ ನಿಯಮಗಳನ್ನು ಅನುಸರಿಸಿ ಬೆಲೆ ನಿಗದಿಪಡಿಸಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)